# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 07.11.2019 ರಂದು ಪೂರ್ವಾಹ್ನ ಗಂಟೆ 11:30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2019ನೇ ಸಾಲಿನ ಆರನೆಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು:**

**ಅನುಪಸ್ಥಿತ ಸದಸ್ಯರು:**

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28(1)(ಡಿ) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಪ್ರೊ. ಡಿ. ಶಿವಲಿಂಗಯ್ಯ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಹಾಗೂ ಪ್ರಾಧ್ಯಾಪಕರು, ಸ್ನಾತಕೋತ್ತರ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಸಿಂಡಿಕೇಟ್ ಸಭೆಗೆ ಸ್ವಾಗತಿಸಲಾಯಿತು.

2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28(1)(ಎಫ್) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಡಾ. ಮನೋಹರ್ ವಿನ್ಸೆಂಟ್ ಸೆರಾವೋ, ಪ್ರಾಂಶುಪಾಲರು, ಸಂತ ಅಲೋಶಿಯಸ್ ಸಂಧ್ಯಾ ಕಾಲೇಜು, ಮಂಗಳೂರು ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

3. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28(1)(ಎಫ್) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂಡಿರುವ ಪ್ರೊ. ಶ್ರೀವರ್ಮ ಅಜ್ರಿ ಎಂ., ಪ್ರಾಂಶುಪಾಲರು, ಮಂಜುನಾಥ ಪೈ ಮೆಮೋರಿಯಲ್ ಸರಕಾರಿ ಪ್ರಥಮ ದರ್ಜೆ ಕಾಲೇಜು, ಕಾರ್ಕಳ ಇವರನ್ನು ಮಾನ್ಯ ಕುಲಪತಿಯವರು ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

4. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28(1)(ಡಿ) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂದ್ದ ಪ್ರೊ. ಕಿಶೋರಿ ನಾಯಕ್ ಕೆ., ಡೀನರು, ಕಲಾ ನಿಕಾಯ ಹಾಗೂ ಪ್ರಾಧ್ಯಾಪಕರು, ಸ್ನಾತಕೋತ್ತರ ಆಂಗ್ಲ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರ ಸದಸ್ಯತ್ವದ ಅವಧಿಯು ದಿನಾಂಕ 01.11.2019ರಂದು ಕೊನೆಗೊಂಡು ಸದಸ್ಯತ್ವದಿಂದ ಮುಕ್ತಗೊಂಡಿರುವ ಹಿನ್ನೆಲೆಯಲ್ಲಿ ಸದರಿಯವರು ಸಿಂಡಿಕೇಟ್ ಸದಸ್ಯರಾಗಿ ಸಲ್ಲಿಸಿದ ಸೇವೆಗಾಗಿ ಕೃತಜ್ಞತಾಪೂರ್ವಕವಾಗಿ ಅಭಿನಂದಿಸಲಾಯಿತು.

5. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ದ ಪ್ರಕರಣ 28(1)(ಎಫ್) ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ಮಾನ್ಯ ಕುಲಪತಿಗಳಿಂದ ನಾಮನಿರ್ದೇಶನಗೊಂದ್ದ ಡಾ. ಕುರಿಯನ್, ಪ್ರಾಂಶುಪಾಲರು, ಆಳ್ವಾಸ್ ಕಾಲೇಜು, ಮೂಡಬಿದರೆ ಹಾಗೂ ಪ್ರೊ. ಲಿಯೋ ನೊರೊನಾ, ಪ್ರಾಂಶುಪಾಲರು, ಸಂತ ಫಿಲೋಮಿನಾ ಕಾಲೇಜು, ಪುತ್ತೂರು ಇವರುಗಳ ಸದಸ್ಯತ್ವದ ಅವಧಿಯು ದಿನಾಂಕ 31.10.2019ರಂದು ಕೊನೆಗೊಂಡು ಸದಸ್ಯತ್ವದಿಂದ ಮುಕ್ತಗೊಂಡಿರುವ ಹಿನ್ನೆಲೆಯಲ್ಲಿ ಸದರಿಯವರು ಸಿಂಡಿಕೇಟ್ ಸದಸ್ಯರಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಕೃತಜ್ಞತಾಪೂರ್ವಕವಾಗಿ ಅಭಿನಂದಿಸಲಾಯಿತು.

6. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಾಣಿಜ್ಯ ವಿಭಾಗದಲ್ಲಿ ಪ್ರಾಧ್ಯಾಪಕರು ಹಾಗೂ ವಿಭಾಗದ ಮುಖ್ಯಸ್ಥರಾಗಿದ್ದ ಪ್ರೊ. ರಘುರಾಮ್ ಇವರು ದಿನಾಂಕ 24.10.2019ರಂದು ದೈವಾಧೀನರಾಗಿರುತ್ತಾರೆ. ಸದರಿಯವರು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 1976ರ ಪ್ರಕಾರ 01.02.2012ರಿಂದ 31.01.2013ರ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ ವಿಶ್ವವಿದ್ಯಾನಿಲಯದ ಆಡಳಿತ ಮತ್ತು ಶೈಕ್ಷಣಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಅಲ್ಲದೆ ಇವರು ಮಂಗಳೂರು ವಿಶ್ವವಿದ್ಯಾನಿಲಯದ ಸೆನೆಟ್ ಹಾಗೂ 28.02.2011ರಿಂದ 27.02.2013ರ ಅವಧಿಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ, ವಾಣಿಜ್ಯ ನಿಕಾಯದ ಡೀನರಾಗಿ, ವಿಶ್ವವಿದ್ಯಾನಿಲಯದ ವಿವಿಧ ಸಮಿತಿಗಳಲ್ಲಿ ಕಾರ್ಯನಿರ್ವಹಿಸಿ ಶೈಕ್ಷಣಿಕ ಬೆಳವಣಿಗೆಗೆ ಅಪಾರ ಶಕ್ತಿಯನ್ನು ಧಾರೆ ಎರೆದಿರುತ್ತಾರೆ. ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸಭೆಯು ತನ್ನ ಸಂತಾಪವನ್ನು ವ್ಯಕ್ತಪಡಿಸುತ್ತಾ, ಅಗಲಿದ ದಿವ್ಯಾತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದೂ ಹಾಗೂ ಇವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಕುಟುಂಬದವರಿಗೆ ಹಾಗೂ ಶಿಷ್ಯವರ್ಗಕ್ಕೆ ನೀಡಲಿ ಎಂದು ಕೋರುವ ಈ ಸಂತಾಪ ಸೂಚಕ ನಿರ್ಣಯವನ್ನು ಸಿಂಡಿಕೇಟ್ ಸಭೆಯಲ್ಲಿ ಅಂಗೀಕರಿಸಲಾಯಿತು.

**I ನಡಾವಳಿಗಳ ದೃಢೀಕರಣ:**

ದಿನಾಂಕ 23.09.2019ರಂದು ನಡೆದ 2019ನೇ ಸಾಲಿನ ಸಿಂಡಿಕೇಟಿನ ಐದನೆಯ ಸಾಮಾನ್ಯ ಸಭೆಯ ನಡಾವಳಿಯ ಇತರ ವಿಷಯಗಳಲ್ಲಿ Upgradation of Existing IBM Incubation Centre at Mangalore University ಬಗ್ಗೆ KEONICS ಮೂಲಕ ಅನುಷ್ಠಾನಗೊಳಿಸುವ ಪ್ರಸ್ತಾವನೆಯಲ್ಲಿ KEONICSರವರ ಪರಿಷ್ಕೃತ ದರಪಟ್ಟಿಯಂತೆ ಉಪಕರಣಗಳನ್ನು ಖರೀದಿಸಿ Upgradation ಕೆಲಸವನ್ನು KEONICSರವರ ಮೂಲಕ ಮಾಡಿಸುವ ಪ್ರಸ್ತಾವನೆಯನ್ನು ಅನುಮೋದಿಸಿ ಉಳಿದಂತೆ ನಡಾವಳಿಗಳನ್ನು ದೃಢೀಕರಿಸಲಾಯಿತು.

**II ಅನುಸರಣಾ ವರದಿಯ ಅನುಮೋದನೆ:**

ದಿನಾಂಕ 03.08.2019 ರಂದು ನಡೆದ 2019ನೇ ಸಾಲಿನ ಸಿಂಡಿಕೇಟಿನ ನಾಲ್ಕನೆಯ ಸಾಮಾನ್ಯ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯನ್ನು ಅನುಮೋದಿಸಲಾಯಿತು.

**III ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:**

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ.ಘಟಕ ಸಾ.ಸ6:1(2019)

**ವಿಷಯ:** ಶ್ರೀ ಆನಂದ ವಿ. ನಾಸಲಪುರ, ಸಂಶೋಧನಾ ವಿದ್ಯಾರ್ಥಿ, ಸ್ನಾತಕೋತ್ತರ ಕೈಗಾರಿಕಾ ರಸಾಯನಶಾಸ್ತ್ರ ವಿಭಾಗ ಇವರಿಗೆ ವಿದೇಶದಲ್ಲಿ ನಡೆಯುವ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಂಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ.ಘಟಕ ಸಾ.ಸ6:2(2019)

**ವಿಷಯ:** ಶ್ರೀ ದಿವಾಕರ್ ಎಂ. ಎಸ್., ಸಂಶೋಧನಾ ವಿದ್ಯಾರ್ಥಿ, ಸ್ನಾತಕೋತ್ತರ ಜೀವ ವಿಜ್ಞಾನ ವಿಭಾಗ ಇವರಿಗೆ ವಿದೇಶದಲ್ಲಿ ನಡೆಯುವ ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ತತ್ಸಂಬಂಧ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾ.ಸ.6:3(2019)

**ವಿಷಯ:** ಪದವಿ ಮಟ್ಟದ ದೃಶ್ಯಕಲಾ ಅಧ್ಯಯನ ಮಂಡಳಿಯನ್ನು "ಪದವಿ ಮತ್ತು ಸ್ನಾತಕೋತ್ತರ ದೃಶ್ಯಕಲಾ ಸಂಯುಕ್ತ ಅಧ್ಯಯನ ಮಂಡಳಿ" ಎಂದು ಮರುನಾಮಕರಣ ಮಾಡುವ ಬಗ್ಗೆ.

**ನಿರ್ಣಯ:** ಮರುನಾಮಕರಣ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:4(2019)

**ವಿಷಯ:** ಡಾ. ಶ್ಯಾಮಸುಂದರ್ ಜೆ., ಸಹಾಯಕ ಪ್ರಾಧ್ಯಾಪಕರು, ಮಾನವ ಪ್ರಜ್ಞೆ ಮತ್ತು ಯೋಗ ವಿಜ್ಞಾನ ವಿಭಾಗ – ಇವರ ಮೇಲಿನ ಸಿಂಡಿಕೇಟು ಸಭೆಯ ನಿರ್ಣಯವನ್ನು ಅನುಷ್ಠಾನಗೊಳಿಸುವ ಬಗ್ಗೆ.

**ನಿರ್ಣಯ:** ಕಾನೂನು ಸಲಹೆಯಂತೆ ಸದರಿಯವರ ಅಮಾನತು ಅವಧಿಯನ್ನು **"ಕರ್ತವ್ಯದಲ್ಲಿ ಇಲ್ಲದ ಅವಧಿ (Dies Non Period)"** ಎಂದು ಪರಿಗಣಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:5(2019)

**ವಿಷಯ:** ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವ ಶಿಕ್ಷಕರಿಗೆ ಆರ್ಥಿಕ ಸಹಾಯವನ್ನು ವಿಶ್ವವಿದ್ಯಾನಿಲಯದಿಂದ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸದರಿಯವರಿಗೆ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಲು ಅನುಮತಿ ನೀಡಲು ಹಾಗೂ ಹೊಸ ಮಾರ್ಗ ಸೂಚಿಯಂತೆ ಪ್ರಯಾಣ ಅನುದಾವನ್ನು ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.6:6(2019)

**ವಿಷಯ:** ಕೊಂಕಣಿ ಸ್ನಾತಕ ಹಾಗೂ ಸ್ನಾತಕೋತ್ತರ ಪಠ್ಯಕ್ರಮಕ್ಕೆ ಸಂಬಂಧಿಸಿದ ಅಧ್ಯಯನ ಸಾಮಾಗ್ರಿ ಹಾಗೂ ಕೊಂಕಣಿ ಜನಪದ ಕೋಶ ರಚನೆ ಮತ್ತು ಕೊಂಕಣಿ ತೆಸೌರಸ್ (ಪದಕೋಶ) ರಚನಾ ಕಾರ್ಯಕ್ಕೆ ಸಂಬಂಧಿಸಿ ಸಂಭಾವನೆ ದರ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು ಹಾಗೂ ಇಂತಹ ಪ್ರಸ್ತಾವನೆಗಳಿಗೆ ದೂರ ಶಿಕ್ಷಣ ಕೇಂದ್ರದ ಮಾರ್ಗಸೂಚಿಯಂತೆ ಸಂಭಾವನೆ ಇದೆಯೇ ಎಂದು ಪರಿಶೀಲಿಸಿ ಮಂಜೂರು ಮಾಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:7(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಅಂಚೆತೆರಪಿನ ಶಿಕ್ಷಣ ನಿರ್ದೇಶನಾಲಯದಲ್ಲಿ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹುದ್ದೆಗಳ ಸೃಜನೆಗೆ ಸಂಬಂಧಿಸಿದ ಪರಿನಿಯಮ ತಿದ್ದುಪಡಿ ಬಗ್ಗೆ

**ನಿರ್ಣಯ:** ತಿದ್ದುಪಡಿ ಮಾಡಿದ ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:8(2019)

**ವಿಷಯ:** ಸಂಶೋಧನಾ ಹಾಗೂ ಕೈಗಾರಿಕಾ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವುದಕ್ಕೆ ಸಂಬಂಧಿಸಿ ರಚಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:9(2019)

**ವಿಷಯ:** ಡಾ. ಪ್ರೀತಿ ಕೀರ್ತಿ ಡಿಸೋಜಾ, ಸಹಾಯಕ ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ದಿನಾಂಕ 18.11.2019 ಮತ್ತು 19.11.2019ರಂದು Skyline University College, Sharjah ಇಲ್ಲಿ ನಡೆಯಲಿರುವ International Conferenceನಲ್ಲಿ ಭಾಗವಹಿಸುವ ಕುರಿತು.

**ನಿರ್ಣಯ:** ಡಾ. ಪ್ರೀತಿ ಕೀರ್ತಿ ಡಿಸೋಜಾ, ಸಹಾಯಕ ಪ್ರಾಧ್ಯಾಪಕರು, ವಾಣಿಜ್ಯಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ದಿನಾಂಕ 18.11.2019 ಮತ್ತು 19.11.2019ರಂದು ಅಂತರರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:10(2019)

**ವಿಷಯ:** ವಿಶ್ವವಿದ್ಯಾನಿಲಯದ Research Policy ಅನುಮೋದನೆ ಬಗ್ಗೆ

**ನಿರ್ಣಯ:** ವಿಶ್ವವಿದ್ಯಾನಿಲಯದ **ಸಂಶೋಧನಾ ನೀತಿಯನ್ನು** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ಸಾ.ಸ6:11(2019)

**ವಿಷಯ:** ವಿಶ್ವವಿದ್ಯಾನಿಲಯದ ವಕೀಲರ ಯಾದಿಯಲ್ಲಿನ ವಕೀಲರಿಗೆ ನಿಗದಿಪಡಿಸಿರುವ ಶುಲ್ಕ ಪರಿಷ್ಕರಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾಪಿಸಿದಂತೆ ವಕೀಲರಿಗೆ ನಿಗದಿಪಡಿಸಿರುವ ದರಗಳನ್ನು ಅನುಮೋದಿಸಲಾಯಿತು. ವಿಶ್ವವಿದ್ಯಾನಿಲಯದಲ್ಲಿ **"ಲಿಟಿಗೇಷನ್ ರೂಲ್ಸ್"**ಗಳನ್ನು ರಚಿಸಿ ದರಗಳನ್ನು ಅದರಲ್ಲಿ ತರಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:12(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜನೆಗೊಳಪಟ್ಟ ಕಾಲೇಜುಗಳಲ್ಲಿ ಗ್ರಂಥಪಾಲಕರ ನೇಮಕಾತಿಗೆ ಸಂಬಂಧಿಸಿ ಯುಜಿಸಿ ನಿಯಮಾನುಸಾರ ರಚಿಸಬೇಕಾಗಿರುವ ಆಯ್ಕೆ ಸಮಿತಿಗೆ ವಿಶ್ವವಿದ್ಯಾನಿಲಯದಿಂದ ಸದಸ್ಯರನ್ನು ನಾಮನಿರ್ದೇಶಿಸಲು ವಿಷಯ ತಜ್ಞರ ಪಟ್ಟಿಯನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:13(2019)

**ವಿಷಯ:** ರಾಷ್ಟ್ರೀಯ ಪಿಂಚಣಿ ಯೋಜನೆಯಡಿ (ಎನ್.ಪಿ.ಎಸ್) ವಿಶ್ವವಿದ್ಯಾನಿಲಯದ ವಂತಿಗೆಯನ್ನು ಶೇ.10 ರಿಂದ ಶೇ.14ಕ್ಕೆ ಹೆಚ್ಚಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:14(2019)

**ವಿಷಯ:** ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜಿನ ವಾಣಿಜ್ಯ ವಿಭಾಗಕ್ಕೆ ಸಹಾಯಕ ಪ್ರಾಧ್ಯಾಪಕರಾಗಿ ನೇಮಕಗೊಂಡಿರುವ ಶೀ ಪ್ರದೀಪ ಭಂಡಾರಿ ಇವರ ನೇಮಕಾತಿ ಬಗ್ಗೆ ಶ್ರೀ ಅಜಯ ಇವರು ದಾಖಲಿಸಿದ್ದ ರಿಟ್‌ಪಿಟಿಷನ್‌ಗೆ ಸಂಬಂಧಿಸಿದ ನ್ಯಾಯಾಲಯದ ಆದೇಶವನ್ನು ಜಾರಿಗೊಳಿಸುವ ಬಗ್ಗೆ.

**ನಿರ್ಣಯ:** ಆಯ್ಕೆ ಮಂಡಳಿಯ ಶಿಫಾರಸ್ಸಿನಂತೆ ಶ್ರೀ ಪ್ರದೀಪ ಭಂಡಾರಿಯವರ ನೇಮಕಾತಿ ಆದೇಶವನ್ನು ರದ್ದುಪಡಿಸಿ, ಸದರಿ ಹುದ್ದೆಗೆ ಶ್ರೀ ಅಜಯ ಇವರನ್ನು ನೇಮಕಗೊಳಿಸಲು ನಿರ್ಣಯಿಸಲಾಯಿತು. ಮುಂದುವರೆದು ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪಿನಂತೆ ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜಿನಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಯು ಯಾವ ವರ್ಗಕ್ಕೆ ಸೇರುತ್ತದೆ ಎಂದು ಪರಿಶೀಲಿಸಿ ಶ್ರೀ ಪ್ರದೀಪ ಭಂಡಾರಿಯವರಿಗೆ ನಿಯಾಮನುಸಾರ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:15(2019)

**ವಿಷಯ:** ವ್ಯವಹಾರ ಆಡಳಿತ ವಿಭಾಗ – ಗಣಕಯಂತ್ರ ಪ್ರಯೋಗಾಲಯದ 'PROWESS' Database ವಾರ್ಷಿಕ ಚಂದಾ ನವೀಕರಣ ಶುಲ್ಕ ಪಾವತಿಗೆ ಮಂಜುರಾತಿ ನೀಡುವ ಬಗ್ಗೆ

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:16(2019)

**ವಿಷಯ:** ಶೈಕ್ಷಣಿಕ ವರ್ಷ 2020–21ನೇ ಸಾಲಿನ ಸಂಯೋಜನೆಯ ಹಾಗೂ ಶೈಕ್ಷಣಿಕ ವರ್ಷ 2019–20ನೇ ಸಾಲಿನ ಸೇವಾ ಶುಲ್ಕಗಳನ್ನು ಪರಿಷ್ಕರಿಸುವ ಬಗ್ಗೆ.

**ನಿರ್ಣಯ:** BA(HRD)/BSW/BBA/BA(Security & Detective Science)/BVA ಈ ಕೋರ್ಸುಗಳಿಗೆ ಇತರ BA/BSc ಕೋರ್ಸುಗಳಂತೆ ಶುಲ್ಕ ನಿಗದಿ ಪಡಿಸುವ ತಿದ್ದುಪಡಿಯೊಂದಿಗೆ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು ಹಾಗೆಯೇ MASLP ಬದಲಿಗೆ MSc Audiology ಹಾಗೂ MSc Speech, Language & Pathology ಎಂದು ಶಿರೋನಾಮೆಗೆ ಅವಕಾಶ ಮಾಡಿ MASLPಯಂತೆ ಶುಲ್ಕ ನಿಗದಿಪಡಿಸಲು ತೀರ್ಮಾನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:17(2019)

**ವಿಷಯ:** ಮಿಲಾಗ್ರಿಸ್ ಕಾಲೇಜು, ಮಂಗಳೂರು ಇಲ್ಲಿಯ ಬಿ.ಎಸ್ಸಿ. (ಹೆಚ್‌ಎಸ್) ಕೋರ್ಸಿನ ದ್ವಿತೀಯ ವರ್ಷದ ವಿದ್ಯಾರ್ಥಿ ಶ್ರೀ ರ್‍ಯಾನ್ ಬ್ಯಾನಿಸ್ ಇವರು ತೃತೀಯ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗುವ ಬಗ್ಗೆ.

**ನಿರ್ಣಯ:** ಸದರಿ ಪ್ರಸ್ತಾವನೆಯ ಬಗ್ಗೆ ಸರ್ಕಾರದ ಪತ್ರದಲ್ಲಿ ನಿಯಮಾನುಸಾರ ಪರಿಗಣಿಸಿ ಎಂದು ತಿಳಿಸಿರುವುದರಿಂದ ಲಿಂಗ್ಡೊ ವರದಿಯಂತೆ ಹಾಗೂ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಮತ್ತು ವಿಶ್ವವಿದ್ಯಾನಿಲಯದ ನಿಯಮಗಳಲ್ಲಿ ಹಾಜರಾತಿ ಕೊರತೆಗೆ ವಿನಾಯತಿ ನೀಡಲು ಅವಕಾಶವಿರುವುದಿಲ್ಲ ಎಂದು ಸರ್ಕಾರಕ್ಕೆ ತಿಳಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:18(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಪರೀಕ್ಷಾಂಗ ಭವನ (ಪರೀಕ್ಷಾ ಭವನ) ಕಟ್ಟಡವನ್ನು ನಿರ್ಮಿಸುವ ಕಾಮಗಾರಿ – ಅಂದಾಜುಪಟ್ಟಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:19(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆಡಳಿತಸೌಧ ಕಟ್ಟಡಕ್ಕೆ ಲಿಫ್ಟ್ ಅಳವಡಿಸುವ ಕಾಮಗಾರಿ – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:20(2019)

**ವಿಷಯ:** Supplying and commissioning of 250 KVA DG set to Mangala Auditorium at Mangalore University Campus - ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:21(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ವಿಜ್ಞಾನ ಸಂಕೀರ್ಣ ಕಟ್ಟಡದ ಮೊದಲ ಅಂತಸ್ತಿನ ರಸಾಯನಶಾಸ್ತ್ರ ವಿಭಾಗಕ್ಕೆ ಸಂಬಂಧಿಸಿದ L2 ಮತ್ತುL3 ತರಗತಿ ಕೊಠಡಿಗಳನ್ನು ಅನ್ವಯಿಕ ರಸಾಯನಶಾಸ್ತ್ರ ಪ್ರಯೋಗಾಲಯವನ್ನಾಗಿ ಪರಿವರ್ತಿಸುವುದು – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:22(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ "ಸಿ" ಮಾದರಿ ವಸತಿಗೃಹ Block No-1,2 ಮತ್ತು 3ಕ್ಕೆ Galvalume sheet ಅಳವಡಿಸುವ ಕಾಮಗಾರಿ – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:23(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ಯಕ್ಷಗಾನ ಕಲಾ ಕೇಂದ್ರ ಕಟ್ಟಡದ ಮುಂಭಾಗಕ್ಕೆ ಇಂಟರ್‌ಲಾಕ್ ಅಳವಡಿಸುವ ಕಾಮಗಾರಿ – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:24(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಮುಖ್ಯ ನೀರು ಸರಬರಾಜು ವ್ಯವಸ್ಥೆಯ ಮುನ್ನೂರು ಪಂಪು ಸ್ಥಾವರದಲ್ಲಿ ಅಶ್ವ ಶಕ್ತಿಯ Vertical turbine ಪಂಪ್‌ನ್ನು Electrical control panel board ಮತ್ತು FCMA Starter panel ಸಮೇತ ಒದಗಿಸಿ ಅಳವಡಿಸುವುದು.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:25(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ Animal House ನ ಮುಂಭಾಗಕ್ಕೆ ಇಂಟರ್‌ಲಾಕ್ ಅಳವಡಿಸುವ ಕಾಮಗಾರಿ – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಪ್ರಾಣಿ ಸಂಗ್ರಹಾಲಯದ ಮುಂಭಾಗಕ್ಕೆ ಇಂಟರ್‌ಲಾಕ್ ಅಳವಡಿಸುವ ಕಾಮಗಾರಿಯ ಬಗೆಗಿನ ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:26(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಮಹಿಳೆಯರ ವಸತಿಗೃಹದ ನೀರು ಸರಬರಾಜು ಹಾಗೂ ಇನ್ನಿತರ ದುರಸ್ತಿ ಕಾಮಗಾರಿ – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:27(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ಮೊದಲನೇ ದರ್ಜೆ ಕಾಲೇಜು ಮುಂಭಾಗದಲ್ಲಿ Galvalume sheet ಛಾವಣಿ ನಿರ್ಮಿಸುವ ಕಾಮಗಾರಿ – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು. ಕಾರ್ಯಸೂಚಿಯಲ್ಲಿನ ಮೊದಲನೇ ದರ್ಜೆ ಕಾಲೇಜು ಎಂಬುದನ್ನು ಪ್ರಥಮ ದರ್ಜೆ ಕಾಲೇಜು ಎಂದು ತಿದ್ದುಪಡಿ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲು ಕುಲಸಚಿವರಿಗೆ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:28(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದ ವ್ಯವಹಾರ ಆಡಳಿತ ಕೇಂದ್ರ ಕಟ್ಟಡದ ನೀರು ಸರಬರಾಜು ವ್ಯವಸ್ಥೆಗಾಗಿ 20000 ಲೀಟರ್ ಸಾಮರ್ಥ್ಯದ ನೀರಿನ ಆರ್‌ಸಿಸಿ ಭೂಗತ ತೊಟ್ಟಿಯನ್ನು pumping ವ್ಯವಸ್ಥೆಯೊಂದಿಗೆ ನಿರ್ಮಿಸುವುದು – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:29(2019)

**ವಿಷಯ:** Painting work for the Administrative building entrance outside wall & inside wall at Mangalore University – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:30(2019)

**ವಿಷಯ:** Construction of Sump tank 50 KI capacity to the Lecture Complex located at Mangalore University – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:31(2019)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ರವೀಂದ್ರ ಕಲಾಭವನ ಕಟ್ಟಡದ ಹಾಗೂ ವ್ಯವಹಾರ ಆಡಳಿತ ವಿಭಾಗ ಕಟ್ಟಡದ ಮಧ್ಯ ಭಾಗದಲ್ಲಿ ಭದ್ರತಾಗೋಡೆ ನಿರ್ಮಿಸುವ ಕಾಮಗಾರಿ – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:32(2019)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ವ್ಯವಹಾರ ಆಡಳಿತ ವಿಭಾಗ ಕಟ್ಟಡದ ಮುಂಭಾಗದಲ್ಲಿ ತಡೆಗೋಡೆ ನಿರ್ಮಿಸುವ ಕಾಮಗಾರಿ – ಟೆಂಡರ್ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:33(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ನೇತ್ರಾವತಿ ಅತಿಥಿ ಗೃಹದ 1ನೇ ಮಹಡಿಯ (ಉಳಿದ ಭಾಗ) ನಿರ್ಮಾಣ ಕಾಮಗಾರಿ – Extra item Approval.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:34(2019)

**ವಿಷಯ:** Supplying, Installation and Commissioning of package Air conditioner units to the Animal House at Mangalore University Campus, Mangalagngothri - ಹೆಚ್ಚುವರಿ ಪರಿಮಾಣ

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:35(2019)

**ವಿಷಯ:** Repair works to the USIC & Electronics Departments at Mangalore University Mangalagangothri – Excess & Extra ಹಾಗೂ ಪರಿಷ್ಕೃತ ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:36(2019)

**ವಿಷಯ:** Construction of Pavillion for the Play ground of Mangalore University Campus, Mangalagangothri – ಕಾಲಾವಧಿ ವಿಸ್ತರಣೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಮಂವಿ/ಇಡಿ:ಸಾ.ಸ.6:37(2019)

**ವಿಷಯ:** Supplying, Installation and Commissioning of package Air conditioner units to the Animal House at Mangalore University Campus, Mangalagngothri - ಕಾಲಾವಧಿ ವಿಸ್ತರಣೆ.

**ನಿರ್ಣಯ:** ಕಟ್ಟಡ ಸಮಿತಿಯ ನಿರ್ಣಯವನ್ನು ಅನುಮೋದಿಸಲಾಯಿತು. ಇನ್ನು ಮುಂದೆ ಹೆಚ್ಚುವರಿ ಕಾಲಾವಧಿ ವಿಸ್ತರಣೆಯನ್ನು ನೀಡಲು ಕಾರಣ ಮತ್ತು ದಂಡ ವಿಧಿಸಲು ಅಥವಾ ದಂಡ ರಹಿತವಾಗಿ ಕಾಮಗಾರಿ ಪೂರ್ಣಗೊಳಿಸುವ ಬಗ್ಗೆ ವಿವರಗಳನ್ನು ಕಾರ್ಯಸೂಚಿಯಲ್ಲಿ ಮಂಡಿಸಬೇಕಾಗಿ ಕಾರ್ಯಕಾರಿ ಅಭಿಯಂತರರಿಗೆ ತಿಳಿಸಲು ನಿರ್ಧರಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹವಿ:ಸಾ.ಸ.6:38(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2014–15 ನೇ ಸಾಲಿನ ಲೆಕ್ಕಪರಿಶೋಧನ ವರದಿಯ ಬಗ್ಗೆ.

**ನಿರ್ಣಯ:** ಅನುಪಾಲನಾ ವರದಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹವಿ:ಸಾ.ಸ.6:39(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2015–16 ನೇ ಸಾಲಿನ ಲೆಕ್ಕಪರಿಶೋಧನ ವರದಿಯ ಬಗ್ಗೆ.

**ನಿರ್ಣಯ:** ಅನುಪಾಲನಾ ವರದಿಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:40(2019)

**ವಿಷಯ:** ಶೈಕ್ಷಣಿಕ ವರ್ಷ 2020–21ನೇ ಸಾಲಿನ ಶಾಶ್ವತ ಸಂಯೋಜನೆ ಹೊಂದಿರುವ ಕಾಲೇಜುಗಳ ಪುನರ್ ಪರಿಶೀಲನೆಯ ಬಗ್ಗೆ.

**ನಿರ್ಣಯ:** ಶುಲ್ಕ ಪರಿಷ್ಕರಣಾ ಸಮಿತಿಯ ಶಿಫಾರಸ್ಸುಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:41(2019)

**ವಿಷಯ:** ಶೈಕ್ಷಣಿಕ ವರ್ಷ 2019–20ನೇ ಸಾಲಿಗೆ ಆಳ್ವಾಸ್ ಕಾಲೇಜು, ಮೂಡಬಿದಿರೆ ಎಂಬ ವಿದ್ಯಾ ಸಂಸ್ಥೆಯಲ್ಲಿ B.Sc. [FND] ಕೋರ್ಸಿಗೆ ಪ್ರವೇಶಾತಿ ಪಡೆದ Mr. Dhieu Jiel David ಅವರಿಗೆ ಅರ್ಹತಾ ಪ್ರಮಾಣ ಪತ್ರ ನೀಡುವ ಬಗ್ಗೆ.

**ನಿರ್ಣಯ:** ಸದರಿ ಪ್ರಸ್ತಾವನೆ ಬಗ್ಗೆ ಡೀನರುಗಳ ಸಮಿತಿಯಲ್ಲಿ ಚರ್ಚಿಸಿ ಅವರ ಅಭಿಪ್ರಾಯಗಳನ್ನು ಸಿಂಡಿಕೇಟಿಗೆ ಮರುಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:42(2019)

**ವಿಷಯ:** 2 ವಿವಿಧ ನಮೂನೆಯ ಸರ್ಟಿಫಿಕೇಟು ಕೋರ್ಸುಗಳನ್ನು ಪ್ರಾರಂಭಿಸುವ ಬಗ್ಗೆ.

**ನಿರ್ಣಯ:** 2 ವಿವಿಧ ನಮೂನೆಯ ಸರ್ಟಿಫಿಕೇಟು ಕೋರ್ಸುಗಳಾದ Certificate course in Employable Cognitive Skill Development ಮತ್ತು Professional Certificate Course in Banking & Finance ಗಳನ್ನು ವಿಶ್ವವಿದ್ಯಾನಿಲಯದ ಅಧೀನ ಕಾಲೇಜು ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ನಡೆಸಲು Bret Solutions Pvt. Ltd., Bangalore ರವರಿಗೆ ಅನುಮತಿ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:43(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ICSI Signature Award" ಹೆಸರಿನಲ್ಲಿ ಚಿನ್ನದ ಪದಕ ದತ್ತಿನಿಧಿ ಸ್ಥಾಪನೆ ಬಗ್ಗೆ.

**ನಿರ್ಣಯ:** ICSI Signature Award ಎಂಬ ಹೆಸರಿನಲ್ಲಿ ಚಿನ್ನದ ಪದಕ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಗಿ ಸದರಿ ಸಂಸ್ಥೆಯವರಿಗೆ ವಿಶ್ವವಿದ್ಯಾನಿಲಯದ ನಿಯಮಾವಳಿಯಂತೆ ದತ್ತಿನಿಧಿ ಸ್ಥಾಪಿಸಲು ತಿಳಿಸಬಹುದು ಎಂದು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:44(2019)

**ವಿಷಯ:** ಮಾನವಪ್ರಜ್ಞೆ ಮತ್ತು ಯೋಗವಿಜ್ಞಾನ ವಿಭಾಗದಿಂದ ನಡೆಸಲು ಉದ್ದೇಶಿಸಲಿರುವ Health Awareness Programmeನ ಶುಲ್ಕ ನಿಗದಿಪಡಿಸುವ ಬಗ್ಗೆ.

**ನಿರ್ಣಯ:** ಮಾನವಪ್ರಜ್ಞೆ ಮತ್ತು ಯೋಗವಿಜ್ಞಾನ ವಿಭಾಗದಿಂದ ನಡೆಸಲು ಉದ್ದೇಶಿಸಲಿರುವ **ಆರೋಗ್ಯ ಜಾಗೃತಿ ಕಾರ್ಯಕ್ರಮದ** ಶುಲ್ಕ ನಿಗದಿ ಪಡಿಸುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾ.ಸ.6:45(2019)

**ವಿಷಯ:** ಸಂಯೋಜಿತ ಕಾಲೇಜುಗಳ ಆಡಳಿತ ಮಂಡಳಿ/ ಸಲಹಾ ಮಂಡಳಿಗೆ ವಿಶ್ವವಿದ್ಯಾನಿಲಯದ ಸದಸ್ಯರನ್ನು ನಾಮ ನಿರ್ದೇಶನಗೊಳಿಸುವ ಬಗ್ಗೆ.

**ನಿರ್ಣಯ:** ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:46(2019)

**ವಿಷಯ:** BRNS ಪ್ರಾಜೆಕ್ಟ್ CARRT- Microplate Spectrophotometer ಖರೀದಿ ಪ್ರಸ್ತಾವನೆ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:47(2019)

**ವಿಷಯ:** ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿ ಕಾಲೇಜಿನ ಮುಂಭಾಗದಲ್ಲಿ ಹೊಸ ಗೇಟ್ ಅಳವಡಿಸುವ ಹಾಗೂ ಒಂದು ತರಗತಿ ಕೊಠಡಿಯ ನಿರ್ಮಾಣಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿನ ಹಳೆ ವಿದ್ಯಾರ್ಥಿ ಸಂಘದವರು ಕಾಲೇಜಿನ ಮುಂಬಾಗದಲ್ಲಿ ಹೊಸ ಗೇಟನ್ನು ಅಳವಡಿಸುವ ಹಾಗೂ ಟಾಟಾ ಕಾಫಿ ಲಿಮಿಟೆಡ್, ಇಂಜಿನಿಯರಿಂಗ್ ವಿಭಾಗ (ಕೊಡಗು), ಬೆಂಗಳೂರು ಇವರು ಒಂದು ತರಗತಿ ಕೊಠಡಿಯನ್ನು ನಿರ್ಮಾಣ ಮಾಡುವ ಪ್ರಸ್ತಾವನೆಗೆ ಅನುಮತಿ ನೀಡಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:48(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಕಂಪ್ಯೂಟರ್ ಅಪರೇಟರ್ ಹುದ್ದೆಯ ವೇತನ ಶ್ರೇಣಿಯನ್ನು ಪರಿಷ್ಕರಿಸುವ ಬಗ್ಗೆ.

**ನಿರ್ಣಯ:** 1986ರ ಕೇಂದ್ರ ವೇತನ ಶ್ರೇಣಿ ರೂ.1600–2990 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಂಪ್ಯೂಟರ್ ಅಪರೇಟರ್‌ಗಳ ವೇತನವನ್ನು ಅದಕ್ಕೆ ಸಮಾನವಾದ 1998ರ ರಾಜ್ಯ ವೇತನ ಶ್ರೇಣಿ ರೂ.5200–9580 ಕ್ಕೆ ನಿಗದಿಪಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:49(2019)

**ವಿಷಯ:** ಡಾ. ದಶರಥ ಪಿ. ಅಂಗಡಿ, ಸಹ ಪ್ರಾಧ್ಯಾಪಕರು ಹಾಗೂ ಸಂಯೋಜಕರು ಭೂಗೋಳಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರಿಗೆ KUALA LUMPUR, MALAYSIAಇಲ್ಲಿ ನಡೆಯಲಿರುವ 8th UGIT's International Conference ನಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾ.ಸ.6:50(2019)

**ವಿಷಯ:** ಸೆಪ್ಟೆಂಬರ್ 2019ರಲ್ಲಿ ಜರುಗಿದ ವಿಶ್ವವಿದ್ಯಾನಿಲಯದ ಬಿ. ಎಡ್. ಪದವಿ ಪರೀಕ್ಷೆಯಲ್ಲಿ ಪರೀಕ್ಷಾ ಅವ್ಯವಹಾರ ನಡೆಸಿದ ವಿದ್ಯರ್ಥಿಗಳ ಬಗ್ಗೆ ತನಿಖಾ ವರದಿ.

**ನಿರ್ಣಯ:** ತನಿಖಾ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.6:51(2019)

**ವಿಷಯ:** EQUAM-BI ಪ್ರಾಜೆಕ್ಟ್ – Books and Periodicals ಖರೀದಿಯ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾ.ಸ.6:52(2019)

**ವಿಷಯ:** EQUAM-BI ಪ್ರಾಜೆಕ್ಟ್ – ಉಪಕರಣಗಳ ಖರೀದಿಯ ಬಗ್ಗೆ.

**ನಿರ್ಣಯ:** ಖರೀದಿ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ: ಸಾ.ಸ.6:53(2019)

**ವಿಷಯ:** ಎನ್. ಎಸ್. ಎಸ್. ಸಂಯೋಜನಾಧಿಕಾರಿ ನೇಮಕಾತಿ ಆಯ್ಕೆ ಮಂಡಳಿಯ ನಡಾವಳಿಯ ಶಿಫಾರಸ್ಸಿನ ಅನುಮೋದನೆ ಬಗ್ಗೆ.

**ನಿರ್ಣಯ:** ನೇಮಕಾತಿ ಮಂಡಳಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ: ಸಾ.ಸ.6:54(2019)

**ವಿಷಯ:** ಡಿ. ಲಿಟ್. ಪದವಿ ಪ್ರದಾನ – ಪರೀಕ್ಷಕರ ಆಯ್ಕೆ ಬಗ್ಗೆ.

**ನಿರ್ಣಯ:** ಪರೀಕ್ಷಕರ ಪಟ್ಟಿಗೆ ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾ.ಸ.6:55(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿನ ಸಭಾಂಗಣಗಳ ನಾಮಕರಣ ಬಗ್ಗೆ

**ನಿರ್ಣಯ:** ಸಭಾಂಗಣಗಳ ನಾಮಕರಣದ ಪ್ರಸ್ತಾವನೆಗೆ ಘಟನೋತ್ತರ ಅನುಮೋದನೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾ.ಸ.6:56(2019)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಬೋಧಕೇತರ ಹುದ್ದೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ಕ್ರೋಡಿಕೃತ ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಸಾ.ಸ.6:57(2019)

**ವಿಷಯ:** UGC-SAP ಯೋಜನೆಯಡಿ ಮಂಜೂರಾದ ಅನುದಾನದ Non-Recurring ಶೀರ್ಷಿಕೆಯಡಿ ಉಪಕರಣ ಖರೀದಿಗೆ ಮಂಜೂರಾತಿ ನೀಡುವ ಬಗ್ಗೆ.

**ನಿರ್ಣಯ:** ವಿಶ್ವವಿದ್ಯಾನಿಲಯ ಅನುದಾನ ಆಯೋಗದ ಸುತ್ತೋಲೆಯಂತೆ UGC-SAP ಯೋಜನೆಯ Non-Recurring ಶೀರ್ಷಿಕೆಯಡಿಯಲ್ಲಿ ಮಂಜೂರಾದ ಅನುದಾನದಿಂದ ಉಪಕರಣಗಳನ್ನು 31.03.2020ರ ಒಳಗೆ ಖರೀದಿಸಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗಿರುವುದರಿಂದ ವಿಶ್ವವಿದ್ಯಾನಿಲಯದ ನಿಧಿಯಿಂದ ರೂ.56.00 ಲಕ್ಷ (ರೂಪಾಯಿ ಐವತ್ತಾರು ಲಕ್ಷ) ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಇತರ ವಿಷಯಗಳು:**

ಜನವರಿ, 2020ರಲ್ಲಿ ವಿಶ್ವವಿದ್ಯಾನಿಲಯದ ವಾರ್ಷಿಕ ಘಟಿಕೋತ್ಸವ ನಡೆಸಲು ಉದ್ದೇಶಿಸಿರುವುದರಿಂದ ಗೌರವ ಡಾಕ್ಟರೇಟ್ ಪ್ರದಾನ ಮಾಡುವ ಪ್ರಸ್ತಾವನೆಯನ್ನು ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿ, ಇದುವರೆಗೆ ಶಿಫಾರಸ್ಸಾಗಿ ಬಂದಿರುವ ವ್ಯಕ್ತಿ ಪರಿಚಯಗಳನ್ನು ಒಪ್ಪಲಾಗಿ, ಮುಂದಿನ ಸಿಂಡಿಕೇಟಿಗೆ ಇನ್ನೂ ಹೆಚ್ಚಿನ ಶಿಫಾರಸ್ಸುಗಳು ಬಂದಲ್ಲಿ ಪರಿಗಣಿಸಿ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳು ಹಾಗೂ ಕರ್ನಾಟಕದ ಸನ್ಮಾನ್ಯ ರಾಜ್ಯಪಾಲರಿಗೆ ಪಟ್ಟಿಯನ್ನು ಸಲ್ಲಿಸಲು ನಿರ್ಣಯಿಸಲಾಯಿತು.

ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು |